| ವಿವರ | ಯೋಜನೆಗಳ ಸಂಖ್ಯೆ | ಬಂಡವಾಳ ಹೂಡಿಕೆ (ರೂ.ಕೋಟಿ) |
|---|---|---|
| ರಾಜ್ಯ ಏಕಗವಾಕ್ಷಿ ಸಭೆಗಳಲ್ಲಿ ಅನುಮೋದನೆಯಾದ ಯೋಜನೆಗಳು | 608 | 2,83,415 |
| ಒಡಂಬಡಿಕೆ ಮಾಡಿಕೊಂಡ ಯೋಜನೆಗಳು | 57 | 5,41,369 |
| ಸಮಾವೇಶದಲ್ಲಿ ಪ್ರಮುಖ ಕೈಗಾರಿಕೊದ್ಯಮಿಗಳು ಘೋಷಿಸಿದ ಬಂಡವಾಳ ಹೂಡಿಕೆ | 02 | 1,57,000 |
| **ಒಟ್ಟು** | **667** | **9,81,784** |

ರಾಜ್ಯದಲ್ಲಿ ಬಂಡವಾಳ ಹೂಡಲು ಆಸಕ್ತಿ ತೋರುವ ಕೈಗಾರಿಕೆಗಳ ಯೋಜನೆಗಳಿಗೆ ಸಿಗುವ ಮೂಲಭೂತ ಸೌಕರ್ಯಗಳನ್ನು ಹಾಗೂ ರಿಯಾಯಿತಿ ಮತ್ತು ಉತ್ತೇಜನಗಳ ಕುರಿತು ವಿವರವಾದ ಮಾಹಿತಿಗಳನ್ನು ನೀಡಲಾಗುತ್ತಿದೆ.

ಸಿಐ 418 ಎಸ್‌ಪಿಐ 2022

**(ಡಾ. ಮುರುಗೇಶ ಆರ್. ನಿರಾಣಿ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 981 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಯು.ಬಿ.ವೆಂಕಟೇಶ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು |
| ಉತ್ತರಿಸುವ ದಿನಾಂಕ | : | 27.12.2022 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಜ್ಯದಲ್ಲಿ ಬಂಡವಾಳ ಹೂಡಿಕೆಯನ್ನು ಉತ್ತೇಜಿಸಲು ಪಾರದರ್ಶಕ ಮತ್ತು ಸುಸ್ಥಿರ ನೀತಿ ನಿಯಮಗಳ ಜಾರಿ ಮೂಲಕ ಕರ್ನಾಟಕ ರಾಜ್ಯವು ಕೈಗಾರಿಕೆಗಳ ಅಭಿವೃದ್ಧಿಯಲ್ಲಿ ಸದಾ ಮುಂದಿದೆ.<br><br>ಏಪ್ರಿಲ್ 2021 ನಿಂದ ಮಾರ್ಚ್ 2022 ರ ಅವಧಿಯಲ್ಲಿ ರಾಷ್ಟ್ರದಲ್ಲಿ ಕರ್ನಾಟಕವು ಕೋವಿಡ್-19 ಸಾಂಕ್ರಾಮಿಕದ ನಡುವೆಯೂ 163795 ಕೋಟಿ (37.5%) ವಿದೇಶಿ ನೇರ ಹೂಡಿಕೆ (FDI)ಯನ್ನು ಆಕರ್ಷಿಸುವ ಮೂಲಕ ಇಡೀ ರಾಷ್ಟ್ರದಲ್ಲಿ 1ನೇ ಸ್ಥಾನದಲ್ಲಿದೆ.<br><br>ಸಂಶೋಧನೆ ಮತ್ತು ಅಭಿವೃದ್ಧಿ, ನಾವಿನ್ಯತೆ, ಉತ್ಕೃಷ್ಟ ಮಾನವ ಸಂಪನ್ಮೂಲ, ಅತಿ ಹೆಚ್ಚಿನ ಇಂಜಿನಿಯರಿಂಗ್, ಐಟಿಐ ಕಾಲೇಜುಗಳಿದ್ದು, ಮೂಲಸೌಕರ್ಯವೂ ಉತ್ತಮವಾಗಿದ್ದು, ಕೈಗಾರಿಕೆಗಳ ಸ್ಥಾಪನೆಗೆ ರಾಜ್ಯದಲ್ಲಿ ಪೂರಕ ಪರಿಸರವಿರುತ್ತದೆ.<br><br>ಕೋವಿಡ್-19ರ ನಂತರ ಹೊಸ ಅವಕಾಶಗಳನ್ನು ಗಮನದಲ್ಲಿಟ್ಟುಕೊಂಡು ಹಾಗೂ ಬೃಹತ್ ಬಂಡವಾಳವನ್ನು ಎಲ್ಲಾ ಕ್ಷೇತ್ರಗಳಲ್ಲಿ ರಾಜ್ಯಕ್ಕೆ ಆಕರ್ಷಿಸುವ ನಿಟ್ಟಿನಲ್ಲಿ ಹೊಸ ಕೈಗಾರಿಕಾ ನೀತಿ 2020-25ನ್ನು ಹೊರತಂದಿದ್ದು, ಈ ನೀತಿಯಲ್ಲಿ ಹಲವಾರು ಸುಧಾರಣೆಗಳನ್ನು ತಂದಿದ್ದು, ಮುಖ್ಯವಾಗಿ ಭೂಮಿ ಸಂಗ್ರಹಣೆ, ಕಾರ್ಮಿಕ ಕಾನೂನುಗಳ ಸುಧಾರಣೆ ಹಾಗೂ ಆಕರ್ಷಕ ರಿಯಾಯಿತಿ ಹಾಗೂ ಉತ್ತೇಜನಗಳನ್ನು ನೀಡಲಾಗಿದೆ.<br><br>ರಾಜ್ಯದಲ್ಲಿ ಉದ್ಯಮ ಸ್ನೇಹಿ ವಾತಾವರಣ ಸೃಷ್ಟಿಸುವುದು, ಕೈಗಾರಿಕೆಗಳ ಆರಂಭ ಪ್ರಕ್ರಿಯೆಯನ್ನು ಇನ್ನಷ್ಟು ಸರಳಗೊಳಿಸಲು ಹಾಗೂ ಸುಲಲಿತ ವ್ಯವಹಾರಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಅಫಿಡವಿಟ್ ಬೇಸ್ಡ್ ಕ್ಲಿಯರೆನ್ಸ್ (ಎಬಿಸಿ) ಯೋಜನೆಯನ್ನು ರಾಜ್ಯ ಸರ್ಕಾರ ಜಾರಿಗೊಳಿಸಿದೆ.<br><br>2022ರ ನವೆಂಬರ್ 2 ರಿಂದ 4ರ ವರೆಗೆ ಬೆಂಗಳೂರಿನ ಅರಮನೆ ಆವರಣದಲ್ಲಿ ಆಯೋಜಿಸಲಾಗಿದ್ದ "ಇನ್ವೆಸ್ಟ್ ಕರ್ನಾಟಕ 2022: ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ"ಕ್ಕೆ ಸಂಬಂಧಿಸಿದಂತೆ ಬಂಡವಾಳ ಹೂಡಿಕೆ ಆಕರ್ಷಣೆ ವಿವರ ಕೆಳಕಂಡಂತಿದೆ. |
| ಆ | ಇನ್ವೆಸ್ಟ್ ಕರ್ನಾಟಕ ಸಮಾವೇಶದ ನಂತರ ಎಷ್ಟು ಕೈಗಾರಿಕೆಗಳು ರಾಜ್ಯಕ್ಕೆ ಆಗಮಿಸಿವೆ; | |
| ಇ | ಎಷ್ಟು ಕೈಗಾರಿಕೆಗಳು ವಿವಿಧ ಕಾರಣಗಳಿಗಾಗಿ ರಾಜ್ಯವನ್ನು ತೊರೆದಿವೆ; ಕಾರಣಗಳೇನು? | |